ಪ್ರಧಾನ ನ್ಯಾಯಿಕ ದಂಡಾಧಿಕಾರಿಗಳು, ಗೋಕಾಕ ಇವರ ನ್ಯಾಯಾಲಯ ಸಾಃ ಗೋಕಾಕ

ಸಾಕ್ಷಿಗೆ ದಿನಾಂಕಃ **21-08-2023** ರಂದು ಪ್ರಮಾಣ ವಚನ ಬೋಧಿಸಲಾಯಿತು

C.C.No.3465/2017
CW-3 PW-2

| | | |
|---|---|---|
| ಸಾಕ್ಷಿದಾರರ ಹೆಸರು | - | ಚಿದಾನಂದ ಸೋಮಲಿಂಗಪ್ಪ ಕೊಣಿ |
| ವಯಸ್ಸು | - | 50 ವರ್ಷ |
| ಉದ್ಯೋಗ | - | ವ್ಯವಸಾಯ |
| ಸಾಕೀನ | - | ಗೋಕಾಕ |

ಮುಖ್ಯ ವಿಚಾರಣೆ: ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ- 2 ರವರ ಪರಿಚಯ ಇಲ್ಲ. ಈ ದಿನ ನ್ಯಾಯಾಲಯದ ಮುಂದಿರುವ ಆರೋಪಿ ನಂ.1 ರವರ ಪರಿಚಯ ಇಲ್ಲ. ಈ ದಿನ ಆರೋಪಿ ನಂ.2 ಮತ್ತು 3 ರವರು ಗೈರು ಹಾಜರಿದ್ದು ಆರೋಪಿ ಪರ ವಕೀಲರು ಅಪರಾಧ ಪ್ರಕ್ರಿಯ ಸಂಹಿತೆಯ ಕಲಂ 317 ರಡಿ ಅರ್ಜಿ ಸಲ್ಲಿಸಿ ಆರೋಪಿ ನಂ.2 ಮತ್ತು 3 ರವರನ್ನು ಗುರುತಿಸುವ ಕುರಿತು ತಕರಾರು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ನನಗೆ ಪೊಲೀಸರು ಯಾವುದೇ ರೇಡ್ ಪಂಚನಾಮೆಕ್ಕೆ ಕರೆಸಿಲ್ಲ. ನನ್ನ ಸಮಕ್ಷಮ ಯಾವುದೇ ರೇಡ್ ಪಂಚನಾಮೆ ಮಾಡಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಈ ಪ್ರಕರಣದ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲ.

ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಗೆ ರೇಡ್ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿಯು ಅದರಲ್ಲಿರುವ ತಮ್ಮ ಹೆಬ್ಬೆರಳಿನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ರೇಡ್ ಪಂಚನಾಮೆಯನ್ನು ಈಗಾಗಲೇ ನಿಪಿ-1 ಎಂದು, ನಿಪಿ-1 ಕ್ಕೆ ನಾನು ವೈಯಕ್ತಿಕ ಕೆಲಸಕ್ಕಾಗಿ ಪೊಲೀಸ ಠಾಣೆಗೆ ಹೋದಾಗ ಪೊಲೀಸರು ನನ್ನಿಂದ ಒಂದು ಬಿಳಿಯ ಹಾಳೆಯ ಮೇಲೆ ಸಹಿ ಪಡೆದಿರುತ್ತಾರೆ. ಅದರಲ್ಲಿ ಬರೆದ ವಿಷಯ ನನಗೆ ಗೊತ್ತಿಲ್ಲ.

(ಈ ಸಂದರ್ಭದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ದಿಃ 05-07-2017 ರಂದು ನನ್ನನ್ನು ಹಾಗೂ ಚಾಸಾ-2 ರವರನ್ನು ಪೊಲೀಸರು ಠಾಣೆಗೆ ಕರೆಯಿಸಿ ಈ ಘಟನೆ ಕುರಿತು ತಿಳಿಸಿ ಧಾಳಿ ಪಂಚನಾಮೆಗೆ ಪಂಚರಾಗಲು

ಕೋರಿಕೊಂಡಿದ್ದರು ಎಂದರೆ ಸರಿಯಲ್ಲ. ನಾನು ಹಾಗೂ ಚಾಸಾ-2 ರವರು ಪಂಚರಾಗಲು ಒಪ್ಪಿಕೊಂಡ ಮೇರೆಗೆ ಚಾಸಾ-1 ರವರು ತೋರಿಸಿದ ಘಟನಾ ಸ್ಥಳದಲ್ಲಿ ಸಾಯಂಕಾಲ 04.45 ರಿಂದ 05.45 ಗಂಟೆಯವರೆಗೆ ಪಂಚನಾಮೆ ಮಾಡಿದ್ದರು ಎಂದರೆ ಸರಿಯಲ್ಲ. ನಿಪಿ-1 ರ ಪಂಚನಾಮೆ ಜರುಗಿಸುವಾಗ 1) ರಿಮೋಟ್, 2) ಒಂದು ಪ್ಲೇವುಡ್ ಬಾಕ್ಸ್,3) ಕಾರು ಗಾಡಿ ನಂ.ಎಂ.ಹೆಚ್.07-ಕ್ಯೂ-6750 ಗಳನ್ನು ಅಮಾನತ್ತುಪಡಿಸಿಕೊಂಡಿದ್ದರು ಎಂದರೆ ಸರಿಯಲ್ಲ. ನಾನು ಘಟನಾ ಸ್ಥಳದಲ್ಲಿ ನಿಪಿ-1 ಕ್ಕೆ ಹೆಬ್ಬೆರಳಿನ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈಗ ಆರೋಪಿತರಿಗೆ ಸಹಾಯವಾಗಲಿ ಎನ್ನುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ ಇಲ್ಲ

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

(ರಾಜೀವ ಗೋಳಸಾರ)
ಪ್ರ.ದಿ.&ನ್ಯಾದಂ., ಗೋಕಾಕ.